ಅಧ್ಯಕ್ಷರು.—ಪಾಸ್ ಮಾಡುವುದಲ್ಲ. ಮುಂದಿನ ವರ್ಷದಿಂದ ಆಗಲಿ ನಾಳೆ ಚರ್ಚೆ ಮಾಡೋಣ.

SRI MALLIKARJUN M. KHARGE.– Why you are creating now convention ? It is contrary to rules. Unless another demand is passed, this cannot be taken moved

SRI A. LYKSHMISAGAR.—It is not illegal.

ಅಭಿಯಾಚನೆ ಕ್ರಮಾಂಕ–೩೮ ನ್ಯಾಯ ಪರಿಪಾಲನೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ರೇಷ್ಮೆ ಮಂತ್ರಿಗಳು) ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧.೩.೧೯೮೯ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ನ್ಯಾಯ ಪರಿಪಾಲನೆ ಸಂದಾಯ ಮಾಡುವಲ್ಲಿ ೨೬,೯೭,೪೧,೪೧೧ ರೂ.ಗಳಿಗಿಂತ ಮಿಗಾರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಬೇಕೆಂದು ಪ್ರಸ್ತಾಪಿಸಲು ನಾನು ಅನುಮತಿಯನ್ನು ಕೋರುತ್ತೇನೆ.

ಅಭಿಯಾಚನೆ ಕ್ರಮಾಂಕ ೫–ಮಾನುಗಾರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ರೇಷ್ಮೆ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೯ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮಾನುಗಾರಿಕೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಡಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೭,೩೪,೪೪,೦೦೦ ರೂ.ಗಳಿಗಿಂತ ಮಿಗಾರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಬೇಕೆಂದು ಪ್ರಸ್ತಾಪಿಸಲು ನಾನು ಅನುಮತಿಯನ್ನು ಕೋರುತ್ತೇನೆ.

ಅಭಿಯಾಚನೆ ಕ್ರಮಾಂಕ ೪೮ ರೇವು ಮತ್ತು ಜಲಸಾರಿಗೆ ಸೇವೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ರೇಷ್ಮೆ ಮಂತ್ರಿಗಳು) ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧.೩.೧೯೮೯ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರೇವು ಮತ್ತು ಜಲ ಸಾರಿಗೆ ಸೇವೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಪಡಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ೧.೯೬,೦೨.೦ ರೂ ಗಳಿಗಿಂತ ಮಿಗಾರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೩.೫೦.೦೦.೦೦೦ ರೂ.ಗಳಿಗಿಂತ ಮಿಗಾರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಬೇಕೆಂದು ಪ್ರಸ್ತಾಪಿಸಲು ನಾನು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಮೇಲೆ ಕಾಣಿಸಿದ ಬೇಡಿಕೆಗಳನ್ನು ಮಂಡಿಸಲಾಯಿತು.

ಪ್ರಕಟಣೆ

ಅಧ್ಯಕ್ಷರು.—ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ಒಂಭತ್ತನೆಯ ನಿಯಮದ ಮೇರೆಗೆ ಅಧ್ಯಕ್ಷತೆ ವಹಿಸುವವರ ಹೆಸರುಗಳ ಪಟ್ಟಿಯಲ್ಲಿರುವ ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್‌ರವರ ಸ್ಥಾನದಲ್ಲಿ ಶ್ರೀಮತಿ ರಮಾಂತಲ ಚೌಗಲೆಯವರನ್ನು ನಾನು ನಾಮನಿರ್ದೇಶನ ಮಾಡಿರುತ್ತೇನೆ

ಅಧ್ಯಕ್ಷರು.—ಸದನವನ್ನು ನಾಳೆ ಬೆಳಿಗ್ಗೆ ಹನ್ನೊಂದು ಗಂಟೆಗೆ ಮುಂದೂಡಲಾಗಿದೆ

(ಸದನವು ೫ ಗಂಟೆ ೫೮ ನಿಮಿಷಕ್ಕೆ ಮುಕ್ತಾಯವಾಗಿ ಪುನಃ ದಿನಾಂಕ ೨೬ನೇ ಮೇ ಮಾಹೆ ೧೯೮೮ರ ಗುರುವಾರದಂದು ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಲಾಯಿತು)